## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 747
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ.
ಉತ್ತರಿಸಬೇಕಾದ ದಿನಾಂಕ : 17-09-2021
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕ್ರೈಸ್ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು).</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ 800 ವಸತಿ ಶಾಲೆಗಳು 26 ಪದವಿ ಪೂರ್ವ ವಿಜ್ಞಾನ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲಾವಾರು ವಿವರವನ್ನು ಅನುಬಂಧ-1 ರಲ್ಲಿ ನೀಡಿದೆ.</td></tr>
<tr><td>ಆ)</td><td>ಸದರಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು;</td><td>ಸಂಘದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋದಕೇತರ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ ಸಂ</th><th>ಹುದ್ದೆ ವಿವರ</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂ ಖ್ಯೆ</th><th>ಖಾಲಿ ಹುದ್ದೆಗಳ ಸಂಖ್ಯೆ</th></tr>
<tr><td>1</td><td>ಬೋಧಕ ಹುದ್ದೆಗಳು</td><td>8821</td><td>4724</td><td>4097</td></tr>
<tr><td>2</td><td>ಬೋಧಕೇತರ ಹುದ್ದೆಗಳು</td><td>2210</td><td>1077</td><td>1133</td></tr>
<tr><td>*3</td><td>ಗ್ರೂಪ್-ಡಿ ಹುದ್ದೆಗಳು</td><td>7961</td><td>7888</td><td>73</td></tr>
<tr><td></td><td>ಒಟ್ಟು</td><td>18992</td><td>13689</td><td>5303</td></tr>
</table>
*ಆರ್ಥಿಕ ಇಲಾಖೆಯ ಆದೇಶದನ್ವಯ ಮಂಜೂರಾಗಿರುವ 7961 ಗ್ರೂಪ್-ಡಿ ವೃಂದದ ಹುದ್ದೆಗಳನ್ನು ಹೊರ ಸಂಪನ್ಮೂಲದ ಏಜೆನ್ಸಿ ಮೂಲಕ ಭರ್ತಿ ಮಾಡಿಕೊಳ್ಳಲಾಗಿರುತ್ತದೆ.</td></tr>
<tr><td>ಇ)</td><td>ಯಾವ ಕಾಲಮಿತಿಯಲ್ಲಿ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.</td><td>ಬೋಧಕ ಹುದ್ದೆಗಳ ಪೈಕಿ 191 ಹಿಂದಿ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ನ್ಯಾಯಾಲಯದ ಅಂತಿಮ ತೀರ್ಮಾನದನ್ವಯ ಕ್ರಮವಹಿಸಲಾಗುವುದು. ಲೋಕಸೇವಾ ಆಯೋಗವು 239 ಸಮಾಜ ವಿಜ್ಞಾನ ಶಿಕ್ಷಕರ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ನೇಮಕಾತಿ ಪ್ರಕ್ರಿಯೆಗೆ ಕ್ರಮವಹಿಸಲಾಗುವುದು.</td></tr>
</table>

| | | |
|---|---|---|
| | | ಉಳಿದಂತೆ ಕೋವಿಡ್-19 ಹಿನ್ನಲೆಯಲ್ಲಿ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಆರ್ಥಿಕ ಇಲಾಖೆ ನಿರ್ಬಂಧ ವಿಧಿಸಿದ್ದು, ನಿರ್ಬಂಧ ತೆರವಾದ ನಂತರ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಕ್ರಮವಹಿಸಲಾಗುವುದು. |
| ಈ) | ಖಾಯಂ ಸಹ ಶಿಕ್ಷಕರಿಗೆ ಉಪನ್ಯಾಸಕರು ಹಾಗೂ ಪ್ರಾಂಶುಪಾಲರ ಹುದ್ದೆಗಳಿಗೆ ಯಾವ ಕಾಲಮಿತಿಯಲ್ಲಿ ಬಡ್ತಿ ನೀಡಲಾಗುವುದು. | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸಮಗ್ರ ತಿದ್ದುಪಡಿ ಮಾಡಿಕೊಳ್ಳುವ ಸಂಬಂಧ ದಿನಾಂಕ: 24.08.2021 ರಂದು ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗಿದ್ದು, ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ, ಮುಂಬಡ್ತಿಗೆ ಕ್ರಮವಹಿಸಲಾಗುವುದು. |
| ಉ) | ಸದರಿ ಶಿಕ್ಷಕರಿಗೆ ಕೆ.ಜಿ.ಐ.ಡಿ, ಡಿ.ಸಿ.ಆರ್.ಜಿ, ಹೆಚ್ಚುವರಿ ವೇತನ ಬಡ್ತಿ ಹಾಗೂ ಇತರೆ ಸೌಲಭ್ಯಗಳನ್ನು ಕಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಒಪ್ಪಿರುವುದಿಲ್ಲ.<br>ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (DCRG) ಸೌಲಭ್ಯ ವಿಸ್ತರಿಸುವ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br>ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ. |
| ಊ) | ಸದರಿ ಸೌಲಭ್ಯಗಳನ್ನು ಯಾವ ಕಾಲಮಿತಿಯಲ್ಲಿ ಕಲ್ಪಿಸಲಾಗುವುದು? | |

ಸಂಖ್ಯೆ: ಸಕಇ 392 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಅನುಬಂಧ- 1

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 605(747)ಕ್ಕೆ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾವಾರು ವಸತಿ ಶಾಲೆ/ ಕಾಲೇಜುಗಳ ವಿವರ

| ಕ್ರಸಂ | ಜಿಲ್ಲೆ | ಒಟ್ಟು |
|---|---|---|
| 1 | ಬಾಗಲಕೋಟೆ | 30 |
| 2 | ಬೆಳಗಾವಿ | 54 |
| 3 | ಬಳ್ಳಾರಿ | 44 |
| 4 | ಬೆಂಗಳೂರು ನಗರ | 5 |
| 5 | ಬೆಂಗಳೂರು ಗ್ರಾಮೀಣ | 12 |
| 6 | ಬೀದರ್ | 29 |
| 7 | ಚಾಮರಾಜನಗರ | 22 |
| 8 | ಚಿಕ್ಕಬಳ್ಳಾಪುರ | 22 |
| 9 | ಚಿಕ್ಕಮಗಳೂರು | 35 |
| 10 | ಚಿತ್ರದುರ್ಗ | 36 |
| 11 | ದಕ್ಷಿಣ ಕನ್ನಡ | 11 |
| 12 | ದಾವಣಗೆರೆ | 23 |
| 13 | ಧಾರವಾಡ | 15 |
| 14 | ಗದಗ | 16 |
| 15 | ಹಾಸನ | 38 |
| 16 | ಹಾವೇರಿ | 28 |
| 17 | ಕಲಬುರ್ಗಿ | 45 |
| 18 | ಕೊಡಗು | 9 |
| 19 | ಕೋಲಾರ | 26 |
| 20 | ಕೊಪ್ಪಳ | 29 |
| 21 | ಮಂಡ್ಯ | 38 |
| 22 | ಮೈಸೂರು | 37 |
| 23 | ರಾಯಚೂರು | 36 |
| 24 | ರಾಮನಗರ | 23 |
| 25 | ಶಿವಮೊಗ್ಗ | 32 |
| 26 | ತುಮಕೂರು | 53 |
| 27 | ಉಡುಪಿ | 9 |
| 28 | ಉತ್ತರ ಕನ್ನಡ | 24 |
| 29 | ವಿಜಯಪುರ | 23 |
| 30 | ಯಾದಗಿರಿ | 22 |
| | ಒಟ್ಟು | **826** |

ಕಾರ್ಯನಿರ್ವಾಹಕ ನಿರ್ದೇಶಕರು